ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015-16 ದಿನಾಂಕ: 29-04-2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ ಐವತ್ತನೆ ಘಟಿಕೋತ್ಸವ:<br><br>ಅಧ್ಯಕ್ಷತೆ:<br><br>ಶ್ರೀ ವಜುಭಾಯಿ ವಾಲ,<br>ರಾಜ್ಯಪಾಲರು, ಕರ್ನಾಟಕ ಸರ್ಕಾರ<br><br>ಘಟಿಕೋತ್ಸವ ಭಾಷಣ:<br><br>ಪದ್ಮ ವಿಭೂಷಣ ಡಾ: ಕೆ. ಕಸ್ತೂರಿರಂಗನ್,<br>ಐ.ಎನ್.ಎ.ಇ. ಸತೀಶ್ ಧವನ್<br>ಇಂಜಿನಿಯರಿಂಗ್ ಉನ್ನತ ಪೀಠ ಹಾಗೂ<br>ಕುಲಾಧಿಪತಿಗಳು, ಜವಹರಲಾಲ್ ನೆಹರೂ<br>ವಿಶ್ವವಿದ್ಯಾಲಯ, ನವದೆಹಲಿ<br><br>ವಿ.ಸೂ:<br>ಈ ಕಾರ್ಯಕ್ರಮಕ್ಕೆ ಮಾಧ್ಯಮದವರನ್ನು<br>ಕರೆದೊಯ್ಯಲು ವಾಹನ ವ್ಯವಸ್ಥೆ ಮಾಡಲಾಗಿದೆ.<br>ವಾಹನ ಅಂದು ಬೆಳಿಗ್ಗೆ 10-00 ಗಂಟೆಗೆ<br>ಕಬ್ಬನ್‌ಪಾರ್ಕ್‌ನಲ್ಲಿರುವ ಪ್ರೆಸ್ ಕ್ಲಬ್<br>ಆವರಣದಿಂದ ಹೊರಡಲಿದೆ | 30-4-2016<br><br>ಶನಿವಾರ<br><br>ಬೆಳಿಗ್ಗೆ<br><br>11-00 ಗಂಟೆಗೆ | ಗಾಂಧೀ ಕೃಷಿ ವಿಜ್ಞಾನ ಕೇಂದ್ರ<br><br>(ಜಿ.ಕೆ.ವಿ.ಕೆ)<br><br>ಡಾ: ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಭವನ<br><br>ಬೆಂಗಳೂರು |

ನಿರ್ದೇಶಕರ ಪರವಾಗಿ

ಪತ್ರಿಕಾ ಪ್ರಕಟಣೆ

# ಕಬ್ಬನ್ ಉದ್ಯಾನವನದಲ್ಲಿ ಈ ಭಾನುವಾರ

**ಬೆಂಗಳೂರು, ಏಪ್ರಿಲ್ 29 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ **ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆದೇಶ ಮತ್ತು ಸಲಹೆಯಂತೆ** ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 01-05-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ ಶ್ರೀಮತಿ ರೇಷ್ಮಾ ಮತ್ತು ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ **"ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ ಧನರಾಜ್ ಮತ್ತು ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.

7. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

### I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ

- ಬೆಳಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಶ್ರೀಮತಿ ದೀಪಾ ಭಟ್ ರವರಿಂದ ಶಾಸ್ತ್ರೀಯ ಹಾಗೂ ಜಾನಪದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಘಂಟೆಯಿಂದ 9.00 ಗಂಟೆಯವರೆಗೆ ಕೆ.ಎಸ್.ಆರ್.ಪಿ. ಪೊಲೀಸ್ ಇಲಾಖೆ ಬೆಂಗಳೂರುರವರಿಂದ ಪೊಲೀಸ್ ಬ್ಯಾಂಡ್ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿದೆ.
- ಬೆಳಗ್ಗೆ 9.00 ರಿಂದ 9.30 ಗಂಟೆವರೆಗೆ ಪರಿಸರವಾದಿ ಶ್ರೀ ಯು.ಎಸ್.ಮೋಹಿನುದ್ದೀನ್ ರವರಿಂದ ಹಸಿರು ಭಾರತ ಮತ್ತು ಹಸಿರು ಭೂಮಿಗಾಗಿ **"One Tree by one person"** ಎಂಬ ಶೀರ್ಷಿಕೆಯಡಿ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಗ್ಗೆ 9.30 ರಿಂದ 10.00 ಗಂಟೆವರೆಗೆ ಶ್ರಿ ವಾಣಿ ವಿದ್ಯಾ ಕೇಂದ್ರ, ಬಸವೇಶ್ವರನಗರ, ಬೆಂಗಳೂರು ಶಾಲಾ ಮಕ್ಕಳಿಂದ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಗ್ಗೆ 6.00 ರಿಂದ 12.00 ಘಂಟೆಯವರೆಗೆ ವಿಧ್ಯಾರಣ್ಯ ಸಂಸ್ಥೆಯ ವತಿಯಿಂದ ಉದ್ಯೋಗಸ್ಥ ಮಹಿಳಾ ಅಂಗವಿಕಲರು ತಯಾರಿಸಿದ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಹಾಗೂ ಗ್ರಾಮೀಣ ಆಟಗಳ ಉಪಕರಣಗಳ ಪ್ರದರ್ಶನ ಮತ್ತು ಮಾರಾಟ.
- ಬೆಳಗ್ಗೆ 7.00 ರಿಂದ 10.00 ಘಂಟೆಯವರೆಗೆ ಯೋಗ ಪ್ರಾಣ ವಿದ್ಯಾ ಸಂಸ್ಥೆಯ **Soham Healing Center,** ಆರ್.ಟಿ. ನಗರ ಬೆಂಗಳೂರು ರವರ ವತಿಯಿಂದ ಪ್ರಾಣ ಚಿಕಿತ್ಸೆ ನೀಡುವ ಕಾರ್ಯಕ್ರಮವನ್ನು ಉಚಿತವಾಗಿ ಏರ್ಪಡಿಸಲಾಗಿದೆ.

ಬಾಬು/ಕೆಎಂ

## ವದಂತಿಗಳಿಗೆ ಕಿವಿಗೊಡಬೇಡಿ

ಬೆಂಗಳೂರು, ಏಪ್ರಿಲ್ 29 (ಕರ್ನಾಟಕ ವಾರ್ತೆ)

2016 ರ ಏಪ್ರಿಲ್/ಮೇ ಸೆಮಿಸ್ಟರ್ ಥಿಯರಿ ಪರೀಕ್ಷೆಗಳು ಈಗಾಗಲೇ ಪ್ರಕಟಗೊಂಡಿರುವ ವೇಳಾಪಟ್ಟಿಯಂತೆ ನಡೆಯುತ್ತದೆಂದು ಸ್ಪಷ್ಟಪಡಿಸಲಾಗಿದೆ. 2016 ರ ಏಪ್ರಿಲ್/ಮೇ ಸೆಮಿಸ್ಟರ್‌ನ ಯಾವುದೇ ದಿನಾಂಕದ ಥಿಯರಿ ಪರೀಕ್ಷೆಗಳನ್ನು ಮುಂದೂಡಲಾಗಿರುವುದಿಲ್ಲ ಎಂದು ಮತ್ತೊಮ್ಮೆ ಸ್ಪಷ್ಟವಾಗಿ ತಿಳಿಸಲಾಗಿದೆ. ಇಲಾಖೆಯ ವೆಬ್‌ಸೈಟ್ ಮತ್ತು ಬಿಟಿಇ ಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಿರುವ ವೇಳಾಪಟ್ಟಿಯೇ ಅಧಿಕೃತ ಎಂದು ತಿಳಿಸಲಾಗಿದೆ.

ಸಾಮಾಜಿಕ ಜಾಲತಾಣ/ಫೇಸ್‌ಬುಕ್/ವ್ಯಾಟ್ಸ್‌ಪ್‌ಗಳಲ್ಲಿನ ಯಾವುದೇ ವದಂತಿಗಳಿಗೆ ಕಿವಿಗೊಡದಿರುವಂತೆ ತಿಳಿಸಲಾಗಿದೆ. ಈ ಮಾಹಿತಿಯನ್ನು ಎಲ್ಲಾ ವಿದ್ಯಾರ್ಥಿಗಳ ಗಮನಕ್ಕೆ ಪರೀಕ್ಷಾ ಕೊಠಡಿಗಳಲ್ಲಿ ಪರಿಚಲನೆ ಮೂಲಕ ತರಲು ಮತ್ತು ಉಪನ್ಯಾಸಕರು/ಪೋಷಕರ ಗಮನಕ್ಕೆ ತಪ್ಪದೇ ತರುವಂತೆ ರಾಜ್ಯದ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ ತಿಳಿಸಲಾಗಿದೆ ಎಂದು ತಾಂತ್ರಿಕ ಪರೀಕ್ಷಾ ಮಂಡಳಿ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.
ಬಾಬು/ಕೆಎಂ